ಸಮಗ್ರ ಗ್ರಾಮೀಣಾಭಿವೃದ್ಧಿ ಯೋಜನೆಯಡಿ ಫಲಾನುಭವಿಗಳನ್ನು ಗುರುತಿಸುವ ಬಗ್ಗೆ.

ಶ್ರೀ ಜಿ.ಎಸ್. ಶಿವನಂಜಪ್ಪ (ಗುಬ್ಬಿ) :— ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ತುಮಕೂರು ಜಿಲ್ಲೆಯಲ್ಲಿ 1998-99ನೇ ಸಾಲಿನಲ್ಲಿ ಸಮಗ್ರ ಗ್ರಾಮೀಣಾಭಿವೃದ್ಧಿ ಯೋಜನೆಯಡಿ ಎಷ್ಟು ಜನ ಫಲಾನುಭವಿಗಳನ್ನು ಗುರುತಿಸಲಾಗಿದೆ.

ಆ) ಎಷ್ಟು ಫಲಾನುಭವಿಗಳಿಗೆ ಬ್ಯಾಂಕುಗಳಿಂದ ಸಹಾಯ ದೊರೆತಿದೆ.

ಇ) ಎಷ್ಟು ಸಹಾಯಧನ ಮಂಜೂರಾಗಿದೆ (ಸಬ್ಸಿಡಿ)? ಪೂರ್ಣ ವಿವರ ನೀಡುವುದು.

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ತುಮಕೂರು ಜಿಲ್ಲೆಯಲ್ಲಿ 1998-99ನೇ ಸಾಲಿನಲ್ಲಿ ಒಟ್ಟು 4755 ಫಲಾನುಭವಿಗಳನ್ನು ಗುರುತಿಸಲಾಗಿದೆ.

ಆ) ಜನವರಿ 99ರ ಅಂತ್ಯಕ್ಕೆ ಒಟ್ಟು 3941 ಫಲಾನುಭವಿಗಳಿಗೆ ಬ್ಯಾಂಕುಗಳಿಂದ ಸಹಾಯ ದೊರೆತಿದೆ ಹಾಗೂ 425.38 ಲಕ್ಷ ರೂ.ಗಳ ಸಾಲ ಮಂಜೂರಾಗಿದೆ.

1998-99ನೇ ಸಾಲಿನಲ್ಲಿ ತುಮಕೂರು ಜಿಲ್ಲೆಗೆ ಆರ್ಥಿಕ ಗುರಿ ರೂ. 358.10 ಲಕ್ಷ ಹಾಗೂ ಭೌತಿಕ ಗುರಿ 4655 (ಫಲಾನುಭವಿಗಳು) ನಿಗದಿಪಡಿಸಲಾಗಿದ್ದು, ಜನವರಿ 99ರ ಅಂತ್ಯಕ್ಕೆ ಒಟ್ಟು 3941 ಫಲಾನುಭವಿಗಳಿಗೆ ರೂ. 212.69 ಲಕ್ಷ ರೂ.ಗಳ ಸಹಾಯಧನ ಮಂಜೂರಾಗಿದೆ.

ಗುಬ್ಬಿ ತಾಲ್ಲೂಕು ಪಡುಗಡಿ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳ ಸಂಖ್ಯೆ.

54(18) ಶ್ರೀ ಜಿ.ಎಸ್. ಶಿವನಂಜಪ್ಪ (ಗುಬ್ಬಿ) :— ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) 1998-99 ನೇ ಸಾಲಿನಲ್ಲಿ ಗುಬ್ಬಿ ತಾಲ್ಲೂಕು ಸಿ.ಎಸ್.ಪುರ ಹೋಬಳಿ, ಪಡುಗಡಿ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಎಷ್ಟು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ?

ಆ) ಎಷ್ಟು ಶಿಕ್ಷಕರುಗಳು ಕೆಲಸ ಮಾಡುತ್ತಿದ್ದಾರೆ? (ಪೂರ್ಣ ವಿವರ ಒದಗಿಸುವುದು)